**CC 2190/2024**

**ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಗಳ**
**ನ್ಯಾಯಾಲಯ, ಹೊಸಪೇಟೆ.**
**ಸಿಸಿ ನಂಬರ್ 2190/2024**

**ಸಿ ಡಬ್ಲ್ಯೂ -2**
**ಪಿ ಡಬ್ಲ್ಯೂ - 1**

| | |
|---|---|
| **ಸಾಕ್ಷಿಯ ಹೆಸರು -** | **ಪರಶುರಾಮ** |
| **ತಾಯಿಯ ಹೆಸರು -** | **ಹನುಮಂತಮ್ಮ** |
| **ವಯಸ್ಸು -** | 32 **ವರ್ಷಗಳು** |
| **ಉದ್ಯೋಗ -** | **ಹೋಟೆಲ್ ನಲ್ಲಿ ಕೆಲಸ** |
| **ವಾಸಸ್ಥಳ -** | **ಹೊಸಪೇಟೆ** |

**ಸಾಕ್ಷಿಯನ್ನು ದಿನಾಂಕಃ 11-09-2025 ರಂದು ಪ್ರಾಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎ. ಪಿ. ಪಿ. ಅವರಿಂದ**

ಈಗ ನಾನು ನೋಡುತ್ತಿರುವ ದಾಖಲೆಯಲ್ಲಿನ ಸಹಿ ನನ್ನದೇ ಆಗಿರುತ್ತದೆ. ಸಾಕ್ಷಿ ಕೃತ್ಯ ಸ್ಥಳ ಮತ್ತು ಜಪ್ತು ಪಂಚನಾಮೆಯಲ್ಲಿನ ಸಹಿ ನೋಡಿ ಗುರುತಿಸಿರುತ್ತಾರೆ. ಸದರಿ ಪಂಚನಾಮೆಯನ್ನು ನಿಪಿಃ 1 ಎಂದು, ಸಾಕ್ಷಿಯ ಸಹಿಯನ್ನು ನಿಪಿಃ 1(ಎ) ಎಂದು ಗುರುತಿಸಲಾಯಿತು.

ನಿಪಿಃ 1 ಕ್ಕೆ ಸುಮಾರು 2 ವರ್ಷಗಳ ಹಿಂದೆ ಪೋಲಿಸ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ನಿಪಿಃ 1 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಆಗಿಲ್ಲ ಮತ್ತು ಯಾವುದೇ ವಸ್ತು ಜಪ್ತು ಪಡಿಸಿಕೊಂಡಿಲ್ಲ.

ಈಗ ನಾನು ನೋಡುತ್ತಿರುವ 2 ಪೋಟೋಗಳಲ್ಲಿನ ವ್ಯಕ್ತಿ ನಾನೇ ಇರುತ್ತೇನೆ. ಸದರಿ ಪೋಟೋಗಳನ್ನು ಒಟ್ಟಾಗಿ ನಿಪಿಃ 2 ಎಂದು ಗುರುತಿಸಲಾಯಿತು. ನಿಪಿಃ 2 ರ ಪೋಟೋವನ್ನು ಯಾವ ಕಾರಣಕ್ಕಾಗಿ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

ನ್ಯಾಯಾಲಯದ ಮುಂದಿರುವ ಆರೋಪಿಯನ್ನು ನಾನು ಈ ಮೊದಲು ನೋಡಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಮಾನ್ಯ ಎ.ಪಿ.ಪಿ. ಅವರು ಅನುಮತಿ ಕೇಳಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲು ಮಾನ್ಯ ಎ ಪಿ ಪಿ ಅವರಿಂದಃ**

ದಿಃ 21-01-2023 ರಂದು ಬೆಳಿಗ್ಗೆ 08.00 ಗಂಟೆಗೆ ಪ್ರಕರಣದ ತನಿಖಾಧಿಕಾರಿಗಳು ಮತ್ತು ಠಾಣೆಯ ಸಿಬ್ಬಂದಿಗಳು ನನ್ನನ್ನು ಮತ್ತು ಚಾಸಾ -3 ರವರನ್ನು ಬಾತ್ಮಿ ಬಂದಿದ್ದ ಸ್ಥಳವಾದ ರಾಂಪೂರ ದುರ್ಗಮ್ಮ ಗುಡಿ ಹತ್ತಿರ ಇರುವ ಆರೋಪಿಯ ಮನೆಗೆ ಕರೆದುಕೊಂಡು ಹೋಗಿದ್ದರು ಅಂದರೆ ಸರಿಯಲ್ಲ. ಸದರಿ ಮನೆಯಲ್ಲಿ ಆರೋಪಿ ವಿವಿಧ ಬ್ರಾಂಡ್ ಗಳ ಮದ್ಯದ ಬಾಟಲ್ ಗಳನ್ನು ಶೇಖರಿಸಿಟ್ಟಿದ್ದ ಅಂದರೆ ಸರಿಯಲ್ಲ. ನನ್ನ ಮತ್ತು ಚಾಸಾ -3 ರವರ ಸಮಕ್ಷಮ ಸ್ಥಳದಲ್ಲಿಯೇ ಸದರಿ ಮದ್ಯದ ಬಾಟಲ್ ಮತ್ತು ಟೆಟ್ರಾ ಪ್ಯಾಕ್ ಗಳನ್ನು  ನಿಪಿಃ 1 ರಂತೆ ಪಂಚನಾಮೆ  ಕ್ರಮ ಜರುಗಿಸಿ ಜಪ್ತ ಪಡಿಸಿಕೊಳ್ಳಲಾಯಿತು ಅಂದರೆ ಸರಿಯಲ್ಲ.

ನಿಪಿಃ 1 ರಲ್ಲಿನ ಅಂಶಗಳನ್ನು ತಿಳಿದು  ಸ್ಥಳದಲ್ಲಿಯೇ ಸಹಿ ಮಾಡಿರುತ್ತೇನೆ ಅಂದರೆ ಸರಿಯಲ್ಲ. ಆಗಲೇ ನಿಪಿಃ 2 ರ ಪೋಟೋ ತೆಗೆಯಲಾಗಿತ್ತು ಅಂದರೆ ಸರಿಯಲ್ಲ. ನನ್ನ ಸಮಕ್ಷಮ ಪಂಚನಾಮೆ ಕ್ರಮ ಜರುಗಿಸಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ.

**CC 2190/2024**

**ಸಿ ಡಬ್ಲ್ಯೂ -2**
**ಪಿ ಡಬ್ಲ್ಯೂ - 1**

**ಪಾಟೀ ಸವಾಲು ಆರೋಪಿ ಪರ ಶ್ರೀ ಎಂ. ಆರ್., ವಕೀಲರಿಂದಃ** ಇಲ್ಲಾ.

ಮರುವಿಚಾರಣೆ ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೇ. ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು
ಹಾಗೂ ಜೆ.ಎಂ.ಎಫ್.ಸಿ., ಹೊಸಪೇಟೆ.